# ಪುರಸಭಾ ಕಾರ್ಯಾಲಯ, ದೇವನಹಳ್ಳಿ

(ಬೆಂಗಳೂರು ಗ್ರಾಮಾಂತರ ಜಿಲ್ಲೆ)

E-Mail:- itstaff_ulb_devanahalli@yahoo.co.in Phone No. 080-27682221
Website:- www.devanahallitown.gov.in

ಸಂಖ್ಯೆ:ದೇಪು/ತಾ.ಶಾ/ಸಿಆರ್/31/2016-17 ದಿನಾಂಕ: 20-05-2017

## "ಪ್ರಾರಂಭಿಕ ಪ್ರಮಾಣ ಪತ್ರ"

ವಿಷಯ: ದೇವನಹಳ್ಳಿ ಪುರಸಭಾ ವ್ಯಾಪ್ತಿಯ ಆಸ್ತಿ ಸಂಖ್ಯೆ:1319/51/1/52/54/1 ರಲ್ಲಿ ನಿರ್ಮಿಸುತ್ತಿರುವ ವಸತಿ ಉಪಯೋಗದ ಅಪಾರ್ಟ್‌ಮೆಂಟ್ಸ್ (ಬೇಸ್‌ಮೆಂಟ್ + ಸ್ಟಿಲ್ಟ್ + ಜಿಎಫ್ + 10ಯುಎಫ್ [164 ವಸತಿ]) ಕಟ್ಟಡಗಳನ್ನು ಪ್ರಾರಂಭಿಕ ಪ್ರಮಾಣ ಪತ್ರ ನೀಡುತ್ತಿರುವ ಬಗ್ಗೆ.

ಉಲ್ಲೇಖ:
1. ತಮ್ಮ ಅರ್ಜಿ ದಿನಾಂಕ: 18-05-2017
2. ಬೆಂಗಳೂರು ಅಂತರ ರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ ದೇವನಹಳ್ಳಿ ರವರ ವಸತಿ ವಿನ್ಯಾಸ ನಕ್ಷೆ ಅನುಮೋದನೆ ನಂ.ಬಿಐಎಪಿಎ/ಟಿ.ಪಿ1/ಸಿಸಿ/ತಾ.ಅ/01/2017-18/132 ದಿನಾಂಕ: 26-04-2017
3. ಈ ಕಛೇರಿಯಿಂದ ನೀಡಿರುವ ಕಟ್ಟಡ ಪರವಾನಗಿ ದಿನಾಂಕ: 17-05-2017

***@@@***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ದೇವನಹಳ್ಳಿ ಪುರಸಭಾ ವ್ಯಾಪ್ತಿಯ ಆಸ್ತಿ ಸಂಖ್ಯೆ:1319/51/1/52/54/1 ರಲ್ಲಿ ನಿರ್ಮಿಸುತ್ತಿರುವ ವಸತಿ ಉಪಯೋಗದ ಅಪಾರ್ಟ್‌ಮೆಂಟ್ಸ್ (ಬೇಸ್‌ಮೆಂಟ್ + ಸ್ಟಿಲ್ಟ್ + ಜಿಎಫ್ + 10ಯುಎಫ್ [164 ವಸತಿ]) ಕಟ್ಟಡಕ್ಕೆ ಪುರಸಭೆಯಿಂದ ಕಟ್ಟಡ ಕಟ್ಟಲು ಪರವಾನಗಿಯನ್ನು ನೀಡಿದ್ದು, ಸದರಿ ಕಟ್ಟಡ ನಿರ್ಮಾಣ ಮಾಡಲು ಪ್ರಾರಂಭಿಕ ಪ್ರಮಾಣ ಪತ್ರ ನೀಡಲು ಉಲ್ಲೇಖ (1) ರಲ್ಲಿ ಮನವಿ ಸಲ್ಲಿಸಿರುವುದು ಸರಿಯಷ್ಟೆ.

ಅದರಂತೆ ಪರಿಶೀಲಿಸಲಾಗಿ ಉಲ್ಲೇಖ (2) ರ ಸೂಚನಾ ಪತ್ರದಲ್ಲಿ ಬೈಯಪ್ಪಾ ಕಛೇರಿಯಿಂದ ರೂ.13,88,000/- ಗಳನ್ನು ಪಾವತಿಸಿಕೊಂಡು ಕಟ್ಟಡ ಕಟ್ಟಲು ತಾಂತ್ರಿಕ ಅಭಿಪ್ರಾಯ ನೀಡಲಾಗಿದ್ದು, ಸದರಿ ಅಭಿಪ್ರಾಯದಂತೆ ಈ ಕಛೇರಿಯ ತಾಂತ್ರಿಕ ಶಾಖೆಯ ಕಿರಿಯ ಅಭಿಯಂತರರ ವರದಿಯಂತೆ ಉಲ್ಲೇಖ (3) ರಲ್ಲಿ ಕಟ್ಟಡ ಕಟ್ಟಲು ಪರವಾನಗಿ ನೀಡಲಾಗಿದ್ದು, ಸದರಿ ಕಟ್ಟಡದ ನಕ್ಷೆಗೆ ಬೈಯಪ್ಪಾ ಕಛೇರಿಯಿಂದ ನೀಡಿರುವ ತಾಂತ್ರಿಕ ಅಭಿಪ್ರಾಯವನ್ನು ಆಧಾರಿಸಿ ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ವಸತಿ ಉಪಯೋಗದ ಅಪಾರ್ಟ್‌ಮೆಂಟ್ಸ್ (ಬೇಸ್‌ಮೆಂಟ್ + ಸ್ಟಿಲ್ಟ್ + ಜಿಎಫ್ + 10ಯುಎಫ್ [164 ವಸತಿ]) ಕಟ್ಟಡಕ್ಕೆ ಕಾಮಗಾರಿಯನ್ನು ಪ್ರಾರಂಭಿಸಲು ಈ ಮೂಲಕ ಅನುಮತಿ ನೀಡಲಾಗಿದೆ.

## ಪಾಲಿಸಬೇಕಾದ ಷರತ್ತುಗಳು

1. ಸ್ವಾಧೀನಾನುಭವ ಪತ್ರಕ್ಕೆ ಅರ್ಜಿ ಸಲ್ಲಿಸುವ ಮುನ್ನ Airport Authority of India ಸಂಸ್ಥೆಯಿಂದ NOC ಪಡೆದು ಕಡ್ಡಾಯವಾಗಿ ಸಲ್ಲಿಸುವುದು. ಇಲ್ಲವಾದಲ್ಲಿ ಸ್ವಾಧೀನಾನುಭವ ಪತ್ರ ಕೋರಿ ಸಲ್ಲಿಸುವ ತಮ್ಮ ಮನವಿಯನ್ನು ಪರಿಗಣಿಸಲಾಗುವುದಿಲ್ಲ.
2. ಪುರಸಭೆಯಿಂದ ಮಂಜೂರಾದ ನಕ್ಷೆಯ ಪ್ರತಿಯನ್ನು ಕಟ್ಟಡ ನಿರ್ಮಾಣ ಮಾಡುವ ಸ್ಥಳದಲ್ಲಿ ಪ್ರದರ್ಶಿಸತಕ್ಕದ್ದು.
3. ಕಾಮಗಾರಿಯಲ್ಲಿ ಮಂಜೂರಾದ ನಕ್ಷೆಗಿಂತ ಯಾವುದೇ ಮಿತಿಮೀರುವಿಕೆ, ಬದಲಾವಣೆಗಳನ್ನು ಮಾಡದೆ ಅಥವಾ ನಿಯಮ ಉಪವಿಧಿಯನ್ನು ಉಲ್ಲಂಘಿಸದಂತೆ ಮಂಜೂರಾದ ಯೋಜನೆಯ ಪ್ರಕಾರ ಕಟ್ಟು ನಿಟ್ಟಾಗಿ ಕಾಮಗಾರಿಯನ್ನು ನಡೆಸತಕ್ಕದ್ದು.

ಪು.ತಿ.ನೋ

4. ಪುರಸಭೆಯಿಂದ ಮಂಜೂರಾದ ನಕ್ಷೆಯ ಪ್ರಕಾರ ಕಟ್ಟಡ ನಿರ್ಮಿಸತಕ್ಕದ್ದು, ಮಂಜೂರಾದ ನಕ್ಷೆಯಲ್ಲಿ ವಿಧಿಸಿದ ಎಲ್ಲಾ ಷರತ್ತುಗಳನ್ನು ಚಾಚೂ ತಪ್ಪದೇ ಪಾಲಿಸತಕ್ಕದ್ದು.
5. ಪ್ರಧಾನ ಕಾರ್ಯದರ್ಶಿಗಳು, ಕಾರ್ಮಿಕ ಇಲಾಖೆ ಬೆಂಗಳೂರು ರವರ ದಿನಾಂಕ: 04-03-2006 ರಂದು ವಿಧಿಸಿದ ಷರತ್ತುಗಳಿಗೆ ಅರ್ಜಿದಾರರು ಬದ್ಧರಾಗಿರತಕ್ಕದ್ದು.
6. ಕಟ್ಟಡದ ಗುಣಮಟ್ಟ, ಸುರಕ್ಷತೆ ಹಾಗೂ ವಿನ್ಯಾಸಗಳಿಗೆ ಪುರಸಭೆಯವರು ಯಾವುದೇ ರೀತಿಯಿಂದ ಜವಾಬ್ದಾರರಾಗಿರುವುದಿಲ್ಲ. ಈ ಅಂಶಗಳ ಪೂರ್ಣ ಜವಾಬ್ದಾರಿಯು ಅಭಿವೃದ್ಧಿದಾರರದ್ದೇ ಆಗಿರುತ್ತದೆ.
7. ಅರ್ಜಿದಾರರು ಕಟ್ಟಡ ನಿರ್ಮಾಣ ಸಮಯದಲ್ಲಿ ಕಟ್ಟಡ ನಿರ್ಮಾಣ ಸಾಮಗ್ರಿಗಳಿಂದಾಗಲೀ ಅಥವಾ ಇನ್ಯಾವುದೇ Released Materials ಗಳಿಂದಾಗಲೀ ಸಾರ್ವಜನಿಕರಿಗೆ ಹಾಗೂ ಪರಿಸರಕ್ಕೆ ಯಾವುದೇ ತೊಂದರೆಯಾಗದಂತೆ ಸೂಕ್ತ ಬ್ಯಾರಿಕೇಡಿಂಗ್ ವ್ಯವಸ್ಥೆ ಮಾಡಿಕೊಂಡು ನಿರ್ಮಾಣ ಕಾರ್ಯ ಕೈಗೊಳ್ಳತಕ್ಕದ್ದು. ತಪ್ಪಿದಲ್ಲಿ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.
8. ಅಭಿವೃದ್ಧಿದಾರರು ಯೋಜನೆ / ಕಟ್ಟಡದ ನಿರ್ಮಾಣಕ್ಕಾಗಿ ಅಗತ್ಯ ವಿನ್ಯಾಸಗಳನ್ನು ತಯಾರಿಸಿಕೊಳ್ಳಲು ಕರ್ನಾಟಕ ರಾಜ್ಯ ಸರ್ಕಾರದಿಂದ ನೋಂದಾಯಿತ Structural Engineer ರವರನ್ನು ನೇಮಿಸಿಕೊಂಡು ಕಟ್ಟಡ ನಿರ್ಮಾಣವನ್ನು ಪ್ರಸ್ತುತ ಚಾಲ್ತಿ ನಿಯಮಗಳನ್ವಯ ಎಲ್ಲಾ ತಾಂತ್ರಿಕ ಅಂಶಗಳನ್ನು ಪಾಲಿಸಿಕೊಂಡು ತಯಾರಿಸಿರುವ ಬಗ್ಗೆ ಹಾಗೂ ನಿರ್ಮಿಸುವ ಬಗ್ಗೆ Structural Engineer ರವರಿಂದ ಪ್ರಮಾಣ ಪತ್ರವನ್ನು (Affidavit) ಕಡ್ಡಾಯವಾಗಿ ಸಲ್ಲಿಸತಕ್ಕದ್ದು.
9. ಅಭಿವೃದ್ಧಿದಾರರು ಯೋಜನೆ / ಕಟ್ಟಡದ ನಿರ್ಮಾಣಕ್ಕಾಗಿ ಅಗತ್ಯ ಇಂಜಿನಿಯರಿಂಗ್ ವಿಧಾನಗಳನ್ನು ಅಳವಡಿಸಿಕೊಂಡು ಉತ್ತಮ ಗುಣಮಟ್ಟದಿಂದ ಕಟ್ಟಡವನ್ನು ನಿರ್ಮಾಣ ಮಾಡಲು ಕರ್ನಾಟಕ ರಾಜ್ಯ ಸರ್ಕಾರದಿಂದ ನೋಂದಾಯಿತ ಯೋಜನಾ ನಿರ್ವಹಣಾ ಸಲಹೆಗಾರರು (Project Management Consultants) ರವರನ್ನು ನೇಮಿಸಿಕೊಂಡು ಕಟ್ಟಡ ನಿರ್ಮಾಣವನ್ನು ಪ್ರಸ್ತುತ ಚಾಲ್ತಿ ನಿಯಮಗಳನ್ವಯ ಎಲ್ಲಾ ತಾಂತ್ರಿಕ ಅಂಶಗಳನ್ನು ಪಾಲಿಸಿಕೊಂಡು ನಿರ್ವಹಿಸುವ ಬಗ್ಗೆ Project Management Consultants ರವರಿಂದ ಪ್ರಮಾಣ ಪತ್ರವನ್ನು (Affidavit) ಕಡ್ಡಾಯವಾಗಿ ಸಲ್ಲಿಸತಕ್ಕದ್ದು.
10. ಅರ್ಜಿದಾರರು ಕಟ್ಟಡದಲ್ಲಿ ವಿದ್ಯುತ್ತೀಕರಣ ಕಾಮಗಾರಿಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಿದ ಬಗ್ಗೆ ಕರ್ನಾಟಕ ರಾಜ್ಯ ಸರ್ಕಾರದಿಂದ ಮಾನ್ಯತೆ ಪಡೆದ ಏಜೆನ್ಸಿ / ಕನ್ಸಲ್ಟೆಂಟ್ ರವರಿಂದ ದೃಢೀಕರಣ ಪತ್ರವನ್ನು ಪಡೆದು ಸ್ವಾಧೀನಾನುಭವ ಪತ್ರ ಪಡೆಯುವ ಸಂದರ್ಭದಲ್ಲಿ ಪುರಸಭೆಗೆ ಕಡ್ಡಾಯವಾಗಿ ಸಲ್ಲಿಸತಕ್ಕದ್ದು.
11. ಪುರಸಭೆಯು ಆಗಿಂದಾಗ್ಗೆ ವಿಧಿಸುವ / ಹೊರಡಿಸುವ ಯಾವುದೇ ಷರತ್ತುಗಳಿಗೆ / ಆದೇಶಗಳಿಗೆ ಅರ್ಜಿದಾರರು ಭದ್ಧರಾಗಿರತಕ್ಕದ್ದು.

ಮುಖ್ಯಾಧಿಕಾರಿ
ಪುರಸಭೆ, ದೇವನಹಳ್ಳಿ

ರವರಿಗೆ,
ಶ್ರೀ ವೈ.ವಿ. ಕೃಷ್ಣರಾವ್ ಪಾಲುದಾರರು ಮೆ॥ ಕೃಷ್ಣಜಾ ಕನ್ಸ್ಟ್ರಕ್ಷನ್ಸ್,
(ಭೂ ಮಾಲೀಕರು ಹಾಗೂ ಶ್ರೀ ಎನ್. ಬೀರಪ್ಪ ಬಿನ್ ಲೇ॥ ಕೆ. ನಾರಾಯಣಪ್ಪ
ರವರ ಪರವಾಗಿ ನೋಂದಾಯಿತ ಜಿ.ಪಿ.ಎ. ದಾರರು), ನಂ.10, ಯಶೋಧನಗರ,
ಜಕ್ಕೂರ್, ಏರೋಡ್ರಮ್ ಎದುರು, ಬಳ್ಳಾರಿ ರಸ್ತೆ, ಬೆಂಗಳೂರು-560064.